7

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE 7/2/2011

# ಬಸವರಾಜ ಹೊರಟ್ಟಿ, ನಜೀರ್ ನಾಮಪತ್ರ ಸಲ್ಲಿಕೆ
# ಸಭಾಪತಿ ಸ್ಥಾನಕ್ಕೆ ಇಂದು ಚುನಾವಣೆ





**ಬೆಂಗಳೂರು:** ಪರಿಷತ್ ಸಭಾಪತಿ ಸ್ಥಾನಕ್ಕೆ ಸ್ಪರ್ಧಿಸಲು ಬಿಜೆಪಿ ಬೆಂಬಲದೊಂದಿಗೆ ಜೆಡಿಎಸ್‌ನ ಬಸವರಾಜ ಹೊರಟ್ಟಿ ಹಾಗೂ ಕಾಂಗ್ರೆಸ್‌ನಿಂದ ನಜೀರ್ ಅಹ್ಮದ್ ಸೋಮವಾರ ನಾಮಪತ್ರ ಸಲ್ಲಿಸಿದರು. ಸಭಾಪತಿ ಆಯ್ಕೆಗೆ ಮಂಗಳವಾರ ಚುನಾವಣೆ ನಡೆಯಲಿದೆ.

ಕೆ.ಪ್ರತಾಪಚಂದ್ರ ಶೆಟ್ಟಿ ರಾಜೀನಾಮೆ ಹಿನ್ನೆಲೆಯಲ್ಲಿ ಈ ಚುನಾವಣೆ ನಡೆಸಲಾಗುತ್ತಿದೆ. ಉಪ ಸಭಾಪತಿ ಆಯ್ಕೆ ಸಂದರ್ಭದಲ್ಲೆ ಬಿಜೆಪಿ-ಜೆಡಿಎಸ್ ನಡುವೆ ಮೈತ್ರಿಯಾಗಿದೆ. ಇದು ಸಭಾಪತಿ ಚುನಾವಣೆಗೂ ಮುಂದುವರಿಯಲಿದೆ. ಹಾಗಾಗಿ ನೂತನ ಸಭಾಪತಿಯಾಗಿ ಹೊರಟ್ಟಿ ಆಯ್ಕೆಯಾಗುವುದು ಬಹುತೇಕ ಖಚಿತ.

| | |
|---|---|
| ಬಿಜೆಪಿ | 31 |
| ಕಾಂಗ್ರೆಸ್ | 29 |
| ಜೆಡಿಎಸ್ | 13 |
| ಪಕ್ಷೇತರ | 01 |
| ಖಾಲಿ | 01 |
| ಒಟ್ಟು | 75 |

ಈ ನಡುವೆಯೂ ಸ್ಪರ್ಧಾ ಮನೋಭಾವದ ದೃಷ್ಟಿಯಿಂದ ಕಾಂಗ್ರೆಸ್‌ನಿಂದ ನಜೀರ್ ಅಹ್ಮದ್ ಅವರನ್ನು ಕಣಕ್ಕಿಳಿಸಲಾಗಿದೆ. ಉಪ ಸಭಾಪತಿ ಚುನಾವಣೆಯಲ್ಲೂ ಕಾಂಗ್ರೆಸ್‌ನಿಂದ ಕೆ.ಸಿ. ಕೊಂಡಯ್ಯ ಅವರನ್ನು ಸ್ಪರ್ಧೆಗೆ ಇಳಿಸಲಾಗಿತ್ತು.

**ವಿಪ್ ಜಾರಿ:** ಹೊರಟ್ಟಿ ಆಯ್ಕೆ ನಿಶ್ಚಿತವೆಂದು ಹೇಳಲಾಗುತ್ತಿದೆ. ಈ ನಡುವೆಯೂ ರಾಜಕೀಯದಲ್ಲಿ ಕಡೆಕ್ಷಣದ ವರೆಗೂ ಲೆಕ್ಕಾಚಾರಗಳು ನಡೆಯುತ್ತವೆ. ಅದರಿಂದ ಅನಿರೀಕ್ಷಿತ ಫಲಿತಾಂಶ ಹೊರಹೊಮ್ಮುವ ಸಾಧ್ಯತೆಯೂ ಇರುತ್ತದೆ. ಹಾಗಾಗಿ ಮೂರೂ ರಾಜಕೀಯ ಪಕ್ಷಗಳಿಂದ ತಮ್ಮ ಸದಸ್ಯರಿಗೆ ವಿಪ್ ಜಾರಿ ಮಾಡಲಾಗಿದೆ.